486(695) ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಜಿರಾದ್) ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ದಾವಣಗೆರೆ ಜಿಲ್ಲೆಯಲ್ಲಿ ಭದ್ರಾ ಕಾಲುವೆ ಆದುನೀಕರಣಕ್ಕೆ ಕಳೆದ 3 ವರ್ಷಗಳಿಂದ ಇಲ್ಲಿಯವರೆಗೆ ಸರ್ಕಾರದಿಂದ ಬಿಡುಗಡೆ ಮಾಡಲಾಗಿರುವ ಹಣದ ಮೊತ್ತವೆಷ್ಟು,

ಆ) ಈ ಪೈಕಿ ಯಾವ ಯಾವ ಕಾಮಗಾರಿಗಳು ಮುಕ್ತಾಯಗೊಂಡಿವೆ, ಉಳಿದಿರುವ ಕಾಮಗಾರಿಗಳು ಯಾವ ಹಂತದಲ್ಲಿದೆ,

ಇ) ಕೋಟ್ಯಾಂತರ ರೂಪಾಯಿಗಳನ್ನು ವೆಚ್ಚ ಮಾಡಿದ್ದರೂ ಸಹ ಈಗ ಮುಕ್ತಾಯಗೊಂಡಿರುವ ಕಾಮಗಾರಿಗಳು ಬಹುತೇಕ ಕಳಪೆ ಗುಣಮಟ್ಟದಿಂದ ಕೂಡಿರುವುದು ನಿಜವೇ,

ಈ) ಹಾಗಿದ್ದಲ್ಲಿ, ಕಳಪೆ ಕಾಮಗಾರಿಗಳನ್ನು ಕೈಗೊಳ್ಳಲು ಕಾರಣರಾದ ಅಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಳ್ಳುವುದು,

ಉ) ಈಗ ನಡೆಯುತ್ತಿರುವ ಕಾಮಗಾರಿಗಳೂ ಸಹ ಕಳಪೆ ಗುಣಮಟ್ಟದಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಊ) ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಳ್ಳುವ ಕ್ರಮಗಳೇನು?

ಶ್ರೀ ಕೆ ಎಸ್ ಈಶ್ವರಪ್ಪ (ಜಲಸಂಪನ್ಮೂಲ ಸಚಿವರು)

ಅ) ದಾವಣಗೆರೆ ಜಿಲ್ಲೆ ವ್ಯಾಪ್ತಿಯಲ್ಲಿ ಭದ್ರಾ ನಾಲಾ ಆಧುನೀಕರಣ ಕಾಮಗಾರಿಗಳಿಗಾಗಿ, ಕಳೆದ 3 ವರ್ಷಗಳಲ್ಲಿ ಬಿಡುಗಡೆ ಮಾಡಲಾದ ಹಣದ ವಿವರ ಈ ರೀತಿ ಇದೆ

(ರೂ ಲಕ್ಷಗಳಲ್ಲಿ)

2004–05	2005–06	2006–07
4 69	711 99	1173 13

ಆ) 2004–05ನೇ ಸಾಲಿನಲ್ಲಿ ಕೈಗೊಂಡ ಎಲ್ಲಾ ಕಾಮಗಾರಿಗಳು ಪೂರ್ಣಗೊಂಡಿರುತ್ತವೆ

2005–06ನೇ ಸಾಲಿನಲ್ಲಿ ಕೈಗೊಂಡ 74 ಕಾಮಗಾರಿಗಳಲ್ಲಿ 61 ಕಾಮಗಾರಿಗಳು ಪೂರ್ಣಗೊಂಡಿರುತ್ತದೆ ಹಾಗೂ 13 ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ

2006–07ನೇ ಸಾಲಿನಲ್ಲಿ ಕೈಗೊಂಡ ಒಟ್ಟು 513 ಕಾಮಗಾರಿಗಳಲ್ಲಿ 257 ಕಾಮಗಾರಿಗಳು ಪೂರ್ಣಗೊಂಡಿರುತ್ತವೆ ಹಾಗೂ 256 ಕಾಮಗಾರಿಗಳು ಪ್ರಗತಿಯಲ್ಲಿರುತ್ತವೆ

ಇ) 7 ಕಾಮಗಾರಿಗಳು ಕಳಪೆ ಮಟ್ಟದಾಗಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದ್ದು ಅವುಗಳನ್ನು ಕಿತ್ತು ಹಾಕಿ ಸಂಬಂಧಿಸಿದ ಗುತ್ತಿಗೆದಾರರಿಂದಲೇ ಸರಿಪಡಿಸಲು ಯೋಜನಾಧಿಕಾರಿಗಳಿಗೆ ಸೂಚಿಸಲಾಗಿದೆ

ಈ) ನ್ಯೂನತೆ ಕಂಡು ಬಂದ ಕಾಮಗಾರಿಗಳನ್ನು ನಿರ್ಮಾಣ ಹಂತದಲ್ಲಿಯೇ ಕಿತ್ತು ಹಾಕಿ ಸಂಬಂಧಿಸಿದ ಗುತ್ತಿಗೆದಾರರಿಂದಲೇ ಹಾಗೂ ಅವರ ವೆಚ್ಚದಲ್ಲಿಯೇ ಸರಿಪಡಿಸಲು ಕ್ರಮ ಕೈಗೊಳ್ಳಲಾಗಿರುವುದರಿಂದ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವ ಪ್ರಶ್ನೆ ಉದ್ಭವಿಸುವುದಿಲ್ಲ

ಉ) ಅಂತಹ ಯಾವುದೇ ಪ್ರಕರಣ ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ

ಊ) ಮೇಲಿನ ಉತ್ತರದಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ

488(934) ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ (ಔರಾದ್) ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಬೀದರ್ ಜಿಲ್ಲೆ ಔರಾದ್ ತಾಲ್ಲೂಕಿನಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ವಿವಿಧ ವಸತಿ ಯೋಜನೆಗಳಡಿಯಲ್ಲಿ ಪ್ರಸಕ್ತ ಸಾಲಿನಲ್ಲಿ ಎಷ್ಟು ಮನೆಗಳನ್ನು ನಿರ್ಮಿಸುವ ಗುರಿಯನ್ನು ಹೊಂದಲಾಗಿದೆ, (ಪೂರ್ಣ ವಿವರಗಳನ್ನು ಗ್ರಾಮಾವಾರು ಅಂಕಿ ಅಂಶಗಳಲ್ಲಿ ಒದಗಿಸುವುದು),

ಆ) ಈ ವೈಕಿ ವಿವಿಧ ಯೋಜನೆಗಳಲ್ಲಿ ಇಲ್ಲಿಯವರೆವಿಗೆ ನಿರ್ಮಿಸಿರುವ ಮನೆಗಳೆಷ್ಟು, ಎಷ್ಟು ಪ್ರಮಾಣದ ಗುರಿಯನ್ನು ಸಾಧಿಸಲಾಗಿದೆ, ಉಳಿದ ಮನೆಗಳನ್ನು ಎಷ್ಟು ಅವಧಿಯಲ್ಲಿ ನಿರ್ಮಿಸಲಾಗುವುದು,